## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 726 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21-02-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಬೆಂಗಳೂರು-ಮೈಸೂರು ದಶಪಥ ರಸ್ತೆಯಲ್ಲಿ ಹಿರಿಯ ನಾಗರಿಕರು ಹಾಗೂ ಮಕ್ಕಳ ಸೌಕರ್ಯಕ್ಕಾಗಿ ಶೌಚಾಲಯ, ಉಪಹಾರ ಕೇಂದ್ರ, ಪೆಟ್ರೋಲ್ ಬಂಕ್, ಅಂಗಡಿ, ಆಸ್ಪತ್ರೆ ಹಾಗೂ ಇತರೆ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಷ್ಟ್ರೀಯ ಹೆದ್ದಾರಿ-275ರ ಬೆಂಗಳೂರು-ಮೈಸೂರು ರಸ್ತೆಯ ಭಾಗವು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುತ್ತದೆ. ಸದರಿ ಹೆದ್ದಾರಿಯಲ್ಲಿ ರಿಯಾಯಿತಿ ಒಪ್ಪಂದದ ಪ್ರಕಾರ ಶೌಚಾಲಯ, ವೈದ್ಯಕೀಯ ನೆರವು ಕೇಂದ್ರಗಳು, ಆಂಬುಲೆನ್ಸ್‌ಗಳು, ಗಸ್ತು ವಾಹನಗಳನ್ನು ಒದಗಿಸಲಾಗಿದೆ. ಆದಾಗ್ಯೂ ಪ್ರತಿ ಟೋಲ್ ಪ್ಲಾಜಾದಲ್ಲಿ ರಸ್ತೆ ಬಳಕೆದಾರರಿಗೆ ಅನುಕೂಲವಾಗುವಂತೆ ಹೆಚ್ಚುವರಿ ಶೌಚಾಲಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಮತ್ತು ಅದರ ನಿರ್ಮಾಣವನ್ನು ಮೇ-2024 ರೊಳಗೆ ಪೂರ್ಣಗೊಳಿಸುವ ಗುರಿಯನ್ನು ಹೊಂದಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಆ | ಹಾಗಾದಲ್ಲಿ ಈ ಸೌಕರ್ಯಗಳನ್ನು ಕಲ್ಪಿಸಲು ಯೋಜನೆ ರೂಪಿಸಲಾಗಿದೆಯೇ; | |
| ಇ | ಹಾಗಾದಲ್ಲಿ ಸದರಿ ಯೋಜನೆಯ ರೂಪುರೇಷೆಗಳೇನು; | |
| ಈ | ಯಾವ ಕಾಲಮಿತಿಯಲ್ಲಿ ಯೋಜನೆಯನ್ನು ರೂಪಿಸಲಾಗುವುದು? | |

ಕಡತ ಸಂಖ್ಯೆ: ಲೋಇ 58 ಸಿಎನ್‌ಹೆಚ್ 2024 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು